ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 670
2. ಸದಸ್ಯರ ಹೆಸರು : ಶ್ರೀ ಪಿ.ಆರ್. ರಮೇಶ್ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 04-03-2021
4. ಉತ್ತರಿಸುವವರು : ಮುಖ್ಯಮಂತ್ರಿಗಳು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬಹುತೇಕ ಎಲ್ಲಾ ರಸ್ತೆಗಳು ಹಳ್ಳ / ತಗ್ಗು ಗುಂಡಿಗಳಿಂದ ಕೂಡಿದ್ದು, ದ್ವಿಚಕ್ರ / ಇತರೆ ವಾಹನ ಸವಾರರಿಗೆ ಸಂಚಾರ ಮಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಬಂದಿದ್ದಲ್ಲಿ ವಿವರ ನೀಡುವುದು)	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬಹುತೇಕ ಎಲ್ಲಾ ರಸ್ತೆಗಳು ಹಳ್ಳ / ತಗ್ಗು ಗುಂಡಿಗಳಿಂದ ಕೂಡಿದ್ದು, ದ್ವಿಚಕ್ರ ವಾಹನ ಸವಾರರಿಗೆ ಸಂಚಾರ ಮಾಡಲು ತೊಂದರೆಯಾಗುತ್ತಿರುವುದು ಗಮನಕ್ಕೆ ಬಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 470 ಆರ್ಟಿರಿಯಲ್ ಮತ್ತು ಸಬ್-ಆರ್ಟಿರಿಯಲ್ ರಸ್ತೆಗಳಿದ್ದು, ಇದರ ಉದ್ದವು 1344.84 ಕಿ.ಮೀ ಗಳಿದ್ದು, 85,229 ಸಂಖ್ಯೆಯ ವಾರ್ಡ್ ರಸ್ತೆಯಿದ್ದು, ಇವುಗಳ ಉದ್ದವು 12,348.5 ಕಿ.ಮೀಗಳಿರುತ್ತದೆ.
ಆ	ಈ ತಗ್ಗು ಗುಂಡಿಗಳಿಂದ ಹಲವು ವಾಹನ ಸವಾರರು ವಾಹನ ಚಾಲನೆ ಮಾಡುವಾಗ ನಿಯಂತ್ರಣ ಕಳೆದುಕೊಂಡು ಸಾವಿಗೆ ಈಡಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಮತ್ತು ಸದರಿ ಎಷ್ಟು ಪ್ರಕರಣಗಳಲ್ಲಿ ಪರಿಹಾರ ಧನ ನೀಡಲಾಗಿದೆ; (ವಿವರ ನೀಡುವುದು)	ಈ ತಗ್ಗು ಗುಂಡಿಗಳಿಂದ ಹಲವು ವಾಹನ ಸವಾರರು ವಾಹನ ಚಾಲನೆ ಮಾಡುವಾಗ ನಿಯಂತ್ರಣ ಕಳೆದುಕೊಂಡು ಸಾವಿಗೆ ಈಡಾಗಿರುವ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ, ಯಾವುದೇ ಪರಿಹಾರ ಧನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.
ಇ	ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ರಸ್ತೆಗಳಲ್ಲಿ ತಗ್ಗುಗುಂಡಿಗಳಲ್ಲದೆ ರಸ್ತೆಗಳನ್ನು ಸುಸ್ಥಿತಿಯಲ್ಲಿಡಲು ಪಾಲಿಕೆಯಿಂದ ತೆಗೆದುಕೊಂಡ ಕ್ರಮಗಳೇನು; ಆಯಾ ವಾರ್ಡ್‌ನ ಅಧಿಕಾರಿಗಳಿಗೆ ರಸ್ತೆಗಳ ಸುಸ್ಥಿತಿಯ ಹೊಣೆಗಾರಿಕೆ ನೀಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ? (ವಿವರ ನೀಡುವುದು)	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಉದ್ಭವಿಸಬಹುದಾದ ರಸ್ತೆ ಗುಂಡಿಗಳನ್ನು ಸಮರ್ಪಕವಾಗಿ ಮುಚ್ಚಿ ರಸ್ತೆಯನ್ನು ಸುಸ್ಥಿತಿಯಲ್ಲಿಡಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. 1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದಲೇ "ಡಾಂಬರು ಮಿಶ್ರಣ ಘಟಕ"ವನ್ನು ಸ್ಥಾಪಿಸಲಾಗಿದ್ದು, ಸದರಿ ಘಟಕದಿಂದ ಪ್ರತಿದಿನ ಡಾಂಬರು ಮಿಶ್ರಣವನ್ನು ಪಡೆದು ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿರುತ್ತದೆ.

. . .2/-

		2. ಸದರಿ ರಸ್ತೆ ಗುಂಡಿಗಳನ್ನು "ರಸ್ತೆ ಗುಂಡಿ ಸೂಚಕ ಪಟ್ಟಿ (Pavement Condition Index)" ಕಾರ್ಯವನ್ನು ಕೈಗೆತ್ತಿಕೊಂಡು ರಸ್ತೆ ಗುಂಡಿಗಳನ್ನು ಗುರುತಿಸಿ ತ್ವರಿತವಾಗಿ ಮುಚ್ಚಲು ಕ್ರಮವಹಿಸಲಾಗುತ್ತಿರುತ್ತದೆ. 3. ರಸ್ತೆ ಅಗೆತ ಪರವಾನಗಿಯನ್ನು Online ಮಾಡಲಾಗಿದ್ದು, ರಸ್ತೆ ಗುಂಡಿಗಳನ್ನು / ರಸ್ತೆ ಕತ್ತರಿಸಿದ ಭಾಗಗಳನ್ನು ತ್ವರಿತವಾಗಿ ದುರಸ್ತಿಗೊಳಿಸಲು ರಸ್ತೆಗಳ ನಿರ್ವಹಣೆ ಬಗ್ಗೆ ಮಾರ್ಗಸೂಚಿಯನ್ನು ರಚಿಸಿದ್ದು, (Standard Operating Procedure) ಅದರ ಪ್ರಕಾರ ರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಮಕೈಗೊಳ್ಳಲಾಗುತ್ತಿದೆ. 4. ಬಿಬಿಎಂಪಿಯ ಹೊರವಲಯ ಪ್ರದೇಶದ 110 ಹಳ್ಳಿಗಳಿಗೆ ನೀರು ಮತ್ತು ಒಳಚರಂಡಿಯನ್ನು ಒದಗಿಸುವ ಕಾಮಗಾರಿಯನ್ನು ಕೈಗೊಂಡಿರುವುದರಿಂದ ರಸ್ತೆ ಅಗೆತವಾಗಿದ್ದು, ಈ ರಸ್ತೆ ಅಗೆತದ ದುರಸ್ಥಿಯನ್ನು ಕೈಗೊಳ್ಳಲು ಅಗತ್ಯವಾದ ಅನುದಾನ ಬಿಡುಗಡೆ ಮಾಡಲು ಆಯುಕ್ತರು, ಬಿಬಿಎಂಪಿ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. ರಸ್ತೆ ಗುಂಡಿ ಮುಚ್ಚುವ ಕ್ರಮವನ್ನು ಆರ್ಟೀರಿಯಲ್ ಮತ್ತು ಸಬ್-ಆರ್ಟೀರಿಯಲ್ ರಸ್ತೆಗಳ ಜವಾಬ್ದಾರಿಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ರಸ್ತೆ ಮೂಲಭೂತ ಸೌಕರ್ಯ ಶಾಖೆಗೆ ನೀಡಲಾಗಿದ್ದು, ವಾರ್ಡ್ ಮಟ್ಟದ ರಸ್ತೆಗಳಲ್ಲಿ ಉಂಟಾಗುವ ರಸ್ತೆ ಗುಂಡಿಗಳನ್ನು ಮುಚ್ಚಲು ಆಯಾ ವಾರ್ಡ್ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಸಂಖ್ಯೆ: ನಅಇ 50 ಎಂಎನ್‌ವೈ 2021 (ಇ)

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ